ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಲಾಕ್‌ಡೌನ್ ಸಮಯದಲ್ಲಿ ವಲಸೆ ಕಾರ್ಮಿಕರ ಸ್ಥಿತಿಗತಿಯ ಬಗ್ಗೆ

ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):-

700 (717) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಲಾಕ್‌ಡೌನ್ ಸಂದರ್ಭದಲ್ಲಿ ವಲಸೆ ಕಾರ್ಮಿಕರನ್ನು ಅವರ ಊರಿಗೆ ಕಳುಹಿಸಲು ಸರ್ಕಾರವು ಯಾವ ಯೋಜನೆಯನ್ನು ಹಮ್ಮಿಕೊಂಡಿದೆ;

(ಆ) ಸರ್ಕಾರವು ಉಚಿತ ಪ್ರಯಾಣಕ್ಕೆ ವ್ಯವಸ್ಥೆಯನ್ನು ಮಾಡಲಾಗಿತ್ತೇ ಅಥವಾ ನಿರ್ದಿಷ್ಟವಾದ ದರವನ್ನು ಏನಾದರೂ ನಿಗದಿ ಮಾಡಲಾಗಿದೆಯೇ ;

(ಇ) ದುಪ್ಪಟ್ಟು ದರ ನಿಗದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

(ಈ) ಹಾಗಿದ್ದಲ್ಲಿ, ಸದರಿ ಯೋಜನೆಯಡಿ ಇದುವರೆವಿಗೂ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; ಇವುಗಳಲ್ಲಿ ಪೂರ್ಣವಾಗಿರುವ ಮತ್ತು ಅಪೂರ್ಣವಾಗಿರುವ ಕಾಮಗಾರಿಗಳಾವುವು?
(ವಿಧಾನ ಕ್ಷೇತ್ರಗಳವಾರು ವಿವರಗಳನ್ನು ನೀಡುವುದು)